ಸರ್ಕಾರವು ಆಸಕ್ತಿ ಹೊಂದಿದೆ.

ವಿಷಯ: ಭಟ್ಕಳ ತಾಲ್ಲೂಕಿನಲ್ಲಿ ಸೇತುವೆ ನಿರ್ಮಾಣ

1215 (1688)

ಶ್ರೀ ಶಿವಾನಂದ ನಾಯ್ಕ (ಭಟ್ಕಳ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

1) ಭಟ್ಕಳ ತಾಲ್ಲೂಕಿನ ಬೈಲೂರು ಗ್ರಾಮದ ತುದಳ್ಳಿ-ಮೂರ್ಡೇಶ್ವರ ಸೇತುವೆ ಹಿಂದುಳಿದ ಜನರಿಗೆ ಅತಿ ಅವಶ್ಯವಿದ್ದುದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು?

3) 1998-99ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಲ್ಲಿ ಹಣ ಮಂಜೂರು ಮಾಡಲಾಗುವುದೇ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

1) ಹೌದು ಬಂದಿದೆ.

2) ನಬಾರ್ಡ್ ಯೋಜನೆಯಡಿಯಲ್ಲಿ ಸದರಿ ಸೇತುವೆಯನ್ನು 30 ಲಕ್ಷ ರೂ. ಮೊತ್ತದಲ್ಲಿ ನಿರ್ಮಿಸಲು ಪರಿಶೀಲಿಸಲಾಗುತ್ತಿದೆ.

3) ಸದರಿ ಕಾಮಗಾರಿಯನ್ನು ನಬಾರ್ಡ್ ಎಂಪವರ್ಡ್ ಕಮಿಟಿಯಲ್ಲಿ ಅನುಮೋದನೆಯಾದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

ವಿಷಯ: ರಾಜ್ಯದಲ್ಲಿ ಸಾಮಾಜಿಕ ಅರಣ್ಯ ಯೋಜನೆ.

1216 (1685)

ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಾಮಾಜಿಕ ಅರಣ್ಯ ಯೋಜನೆಯಡಿಯಲ್ಲಿರುವ ವಿವಿಧ ಯೋಜನೆಗಳಲ್ಲಿ ಅಂದರೆ ಪಶ್ಚಿಮಘಟ್ಟ ಅಭಿವೃದ್ಧಿ ಯೋಜನೆ, ಸಾಮಾಜಿಕ ಅರಣ್ಯ, ಭೂಸಾರ ಸಂರಕ್ಷಣೆ, ಈ ಯೋಜನೆಗಳಲ್ಲಿ ಬೆಳೆಸಿರುವ ಒಟ್ಟು ಸಾಮಾಜಿಕ ಅರಣ್ಯದ ವಿಸ್ತೀರ್ಣವೆಷ್ಟು?